**ಕರ್ನಾಟಕ ಸರ್ಕಾರ**

**ಸಂಖ್ಯೆ:ಇಡಿ 207 ಡಿಎಆರ್ 2017**

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:11/01/2022.

**ಅಧಿಸೂಚನೆ**

**ವಿಷಯ:-** ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿನ ಗ್ರೂಪ್-ಎ ಮತ್ತು ಬಿ ವೃಂದದ ಎಲ್ಲಾ ಬೋಧಕ ಅಧಿಕಾರಿಗಳ ವಾರ್ಷಿಕ ಕಾರ್ಯ ನಿರ್ವಹಣಾ ವರದಿ, ಪುನರವಲೋಕನಾ ಷರಾವನ್ನು ಬರೆಯುವ ಮತ್ತು ಅಭಿರಕ್ಷಣೆಯಲ್ಲಿಡುವ ಅಧಿಕಾರಿಗಳನ್ನು ಗುರುತಿಸಿ ಆದೇಶವನ್ನು ಹೊರಡಿಸುವ ಬಗ್ಗೆ.

*******

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ "ಎ" ಮತ್ತು "ಬಿ" ಗುಂಪಿನ ಅಧಿಕಾರಿಗಳ ವಾರ್ಷಿಕ ಕಾರ್ಯ ನಿರ್ವಹಣಾ ವರದಿಗಳಲ್ಲಿ ವರದಿ, ಪುನರಾವಲೋಕನಾ, ಷರಾವನ್ನು ಬರೆಯುವ ಮತ್ತು ಅಂಗೀಕಾರ / ಅಭಿರಕ್ಷಣೆ ಮಾಡುವ ಪ್ರಾಧಿಕಾರಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 207 ಡಿಎಆರ್ 2017, ದಿನಾಂಕ:08/01/2018ರಲ್ಲಿ ಗುರುತಿಸಿ ಆದೇಶಿಸಲಾಗಿರುತ್ತದೆ. ಅದರಲ್ಲಿ, ನಿರ್ದೇಶಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಅಂಗೀಕರಿಸುವ / ಅಭಿರಕ್ಷಿಸುವ ಪ್ರಾಧಿಕಾರವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ ಇವರನ್ನು ಗುರುತಿಸಲಾಗಿರುವುದನ್ನು ಮಾರ್ಪಡಿಸಿ ಇದರೊಂದಿಗಿನ ಅನುಬಂಧದಲ್ಲಿ ನಮೂದಿಸಿರುವಂತೆ ಗುರ್ತಿಸಿ ಆದೇಶಿಸಿದೆ.

EST-1

20/01

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ. ಧನಂಜಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಆಡಳಿತ)

**ಪ್ರತಿ ಇವರಿಗೆ:-**

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ/ಧಾರವಾಡ.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು.
5. ಎಲ್ಲಾ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ(ಆಯುಕ್ತರು / ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮುಖಾಂತರ).

**ಪ್ರತಿ:-**

(1) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

(2) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

(3) ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

(4) ಶಾಖಾರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.

## ಅನುಬಂಧ

**ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 207 ಡಿಎಆರ್ 2017, ದಿನಾಂಕ:11/01/2022ರಲ್ಲಿನ ಅನುಬಂಧದ ಕ್ರಮ ಸಂಖ್ಯೆ:01ರಲ್ಲಿನ ನಿರ್ದೇಶಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳಿಗೆ ಸಂಬಂಧಿಸಿದಂತೆ ವರದಿ ಮಾಡುವ ಪ್ರಾಧಿಕಾರ, ಪುನರಾವಲೋಕನ ಪ್ರಾಧಿಕಾರ, ಅಂಗೀಕರಿಸುವ ಪ್ರಾಧಿಕಾರ ಹಾಗೂ ಅಭಿರಕ್ಷಣಾ ಪ್ರಾಧಿಕಾರಗಳನ್ನು ಈ ಕೆಳಕಂಡಂತೆ ಗುರುತಿಸಲಾಗಿದೆ.**

| ಕ್ರ ಸಂ | ಹುದ್ದೆಯ ಹೆಸರು | ವರದಿ ಮಾಡುವ ಪ್ರಾಧಿಕಾರ | ಪುನರಾವಲೋಕನ ಪ್ರಾಧಿಕಾರ | ಅಂಗೀಕರಿಸುವ ಪ್ರಾಧಿಕಾರ | ಅಭಿರಕ್ಷಣಾ ಪ್ರಾಧಿಕಾರ |
|---|---|---|---|---|---|
| 1. | ನಿರ್ದೇಶಕರು ಪ್ರಾಥಮಿಕ ಶಿಕ್ಷಣ, **ಪ್ರೌಢಶಿಕ್ಷಣ,** ಉರ್ದು ಮತ್ತು ಇತರೆ ಅಲ್ಪ ಸಂಖ್ಯಾತ ಭಾಷಾ ಶಾಲೆಗಳು, ಡಿ.ಎಸ್.ಇ.ಆರ್.ಟಿ, ಕರ್ನಾಟಕ ಪಠ್ಯಪುಸ್ತಕ ಸಂಘ, ಆರ್.ಐ.ಇ, ಕ.ಪ್ರೌ.ಶಿ.ಪ.ಮಂ ನಿರ್ದೇಶಕರು, ಧಾರವಾಡ ನಿರ್ದೇಶಕರು, ಕಲಬುರಗಿ | ಆಯುಕ್ತರು ಸಾ.ಶಿ.ಇಲಾಖೆ, ಬೆಂಗಳೂರು ಅಪರ ಆಯುಕ್ತರು, ಸಾ.ಶಿ.ಇಲಾಖೆ ಧಾರವಾಡ/ ಕಲಬುರಗಿ | ಸರ್ಕಾರದ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ. | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು | ಸರ್ಕಾರದ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ. |
| 2. | ನಿರ್ದೇಶಕರು ಆರ್.ಎಂ.ಎಸ್.ಎ ಮತ್ತು ಎಸ್.ಎಸ್.ಎ | ರಾಜ್ಯ ಯೋಜನಾ ನಿರ್ದೇಶಕರು | ಸರ್ಕಾರದ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ. | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು | ಸರ್ಕಾರದ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ. |
| 3. | ನಿರ್ದೇಶಕರು ಸಿಸ್ಲಿಪ್, ಧಾರವಾಡ | ಆಯುಕ್ತರು, ಸಾ.ಶಿ.ಇಲಾಖೆ ಧಾರವಾಡ | ಸರ್ಕಾರದ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ. | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು | ಸರ್ಕಾರದ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ. |

ಇಡಿ 207 ಡಿಎಆರ್ 2017
ದಿನಾಂಕ:11/01/2022

(ಎಂ. ಧನಂಜಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಆಡಳಿತ)